## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: Improvements to approach road to Kanva Dam from B. M. Road near Kengal to Dashavara in Channapatana Taluk, Ramanagara District ಕಾಮಗಾರಿಯ ರೂ.28.00 ಕೋಟಿ ಮೊತ್ತದ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

*****

ಓದಲಾಗಿದೆ:-

1. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಾನೀನಿನಿ/ತಾಂತ್ರಿಕ-2/ಎಂ.ಪಿ.ಡಿ/322/2020-21/2581, ದಿನಾಂಕ:27-01-2021

2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಾನೀನಿನಿ/ತಾಂತ್ರಿಕ-2/ಎಂ.ಪಿ.ಡಿ-322/2021-22/1097, ದಿನಾಂಕ:08-09-2021.

ಪ್ರಸ್ತಾವನೆ:-

ಮೇಲೆ ಓದಲಾದ ಪತ್ರಗಳಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಇವರು ರಾಮನಗರ ಜಿಲ್ಲೆ, ಚನ್ನಪಟ್ಟಣ ತಾಲ್ಲೂಕು, ಕನ್ನಮಂಗಲ ಗ್ರಾಮದ ಬಳಿ ಕಣ್ವ ನದಿಗೆ ಅಡ್ಡಲಾಗಿ ಕಣ್ವ ಜಲಾಶಯವನ್ನು ನಿರ್ಮಿಸಲಾಗಿದ್ದು, ಜಲಾಶಯವು ಸುತ್ತಮುತ್ತಲಿನ ಪ್ರಮುಖ ಪ್ರವಾಸಿ ತಾಣಗಳಲ್ಲಿ ಒಂದಾಗಿರುತ್ತದೆ; ಸದರಿ ಜಲಾಶಯವು ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿಯ ಕೆಂಗಲ್‌ನಿಂದ ಕೇವಲ 7.00 ಕಿ.ಮೀ ದೂರದಲ್ಲಿರುವುದರಿಂದ ಇಲ್ಲಿಗೆ ಬೆಂಗಳೂರು, ರಾಮನಗರ, ಮಂಡ್ಯ ಮತ್ತು ಮೈಸೂರು ಜಿಲ್ಲೆಗಳು ಒಳಗೊಂಡಂತೆ ದಿನನಿತ್ಯ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಭೇಟಿ ನೀಡುತ್ತಿರುತ್ತಾರೆ; ಅಲ್ಲದೇ ಸದರಿ ರಸ್ತೆಯು ಕಣ್ವ ಜಲಾಶಯದ ಮೂಲಕ ಕೆಂಗಲ್ ಮತ್ತು ದಶಾವರ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಸಂಪರ್ಕ ರಸ್ತೆಯು ಸಹ ಆಗಿರುತ್ತದೆ ಎಂದು ವರದಿ ಮಾಡಿರುತ್ತಾರೆ.

2.ಪ್ರಸ್ತುತ, ಕಣ್ವ ಜಲಾಶಯದ ಬಳಿ ನೂತನವಾಗಿ ನಿರ್ಮಿಸಲಾಗಿರುವ ಕರ್ನಾಟಕ ಹಾಲು ಒಕ್ಕೂಟ ಮಂಡಳಿ (ಕೆ.ಎಂ.ಎಫ್) ಘಟಕಕ್ಕೆ ಪ್ರತಿನಿತ್ಯ ಭಾರಿ ವಾಹನಗಳ ಸಂಚಾರವು ಹೆಚ್ಚಾಗಿದ್ದು ರಸ್ತೆಯು ತೀವ್ರ ಮಟ್ಟದಲ್ಲಿ ಹಾಳಾಗಿದೆ; ಬಹಳ ಕಿರಿದಾಗಿರುವ ಈ ರಸ್ತೆಯಲ್ಲಿ ಭಾರಿ ವಾಹನಗಳ ಸಂಚಾರ ಮತ್ತು ಪ್ರವಾಸಿ ವಾಹನಗಳ ಸಂಚಾರದಿಂದ ರಸ್ತೆಯು ಸದಾ ವಾಹನಗಳಿಂದ ಕೂಡಿ ಸಂಚಾರ ದಟ್ಟಣೆ ನಿರ್ಮಾಣಗೊಂಡಿರುತ್ತದೆ; ಸದರಿ ಭಾಗದ ಗ್ರಾಮಸ್ಥರು ಹಾಗೂ ಅಧ್ಯಕ್ಷರು, ಕರ್ನಾಟಕ ಹಾಲು ಒಕ್ಕೂಟ ಮಂಡಳಿ (ಕೆ.ಎಂ.ಎಫ್.), ಚನ್ನಪಟ್ಟಣ ಘಟಕ ರವರು ಕಾವೇರಿ ನೀರಾವರಿ ನಿಗಮದ ವತಿಯಿಂದ ಕೆಂಗಲ್‌ನಿಂದ ದಶಾವರ ಗ್ರಾಮದವರೆಗೆ ರಸ್ತೆ ಅಗಲೀಕರಣ ಮತ್ತು ಅಭಿವೃದ್ಧಿಪಡಿಸುವ ಕಾರ್ಯವನ್ನು ಕೈಗೆತ್ತಿಕೊಂಡು ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಕೋರಿರುತ್ತಾರೆ; ಸದರಿ ಕಾಮಗಾರಿಯ ಅಗತ್ಯತೆ ಬಗ್ಗೆ ಪರಾಮರ್ಶಿಸಿ, ಜಲಾಶಯಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುವುದರಿಂದ ಪ್ರವಾಸಿಗರ ಸುರಕ್ಷತೆಯ ಹಿತದೃಷ್ಟಿಯಿಂದ ಸದರಿ ರಸ್ತೆಯನ್ನು ಅಗಲೀಕರಿಸುವುದು ಮತ್ತು ಅಭಿವೃದ್ಧಿಪಡಿಸುವುದು ಅತ್ಯವಶ್ಯಕವಾಗಿರುವುದನ್ನು ಪರಿಗಣಿಸಿ ರಸ್ತೆ ಅಭಿವೃದ್ಧಿಪಡಿಸುವ

ಕಾಮಗಾರಿಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ರವರು ವರದಿ ಮಾಡಿರುತ್ತಾರೆ.

3.ಸದರಿ ರಸ್ತೆಯ ಅಂದಾಜು ಪಟ್ಟಿಯನ್ನು ಜಲಸಂಪನ್ಮೂಲ ಇಲಾಖೆಯ 2018-19ನೇ ಸಾಲಿನ ದರಪಟ್ಟಿ ಹಾಗೂ ಲೋಕೋಪಯೋಗಿ ಇಲಾಖೆ, ಬೆಂಗಳೂರು 2018-19ನೇ ಸಾಲಿನ ದರಪಟ್ಟಿ ಪರಿಗಣಿಸಿ ರೂ.28.00 ಕೋಟಿ ಮೊತ್ತಕ್ಕೆ ತಯಾರಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ರವರು ವರದಿ ಮಾಡಿರುತ್ತಾರೆ.

4.ಸದರಿ ಪ್ರಸ್ತಾವನೆಗೆ ದಿನಾಂಕ:29-09-2020 ರಂದು ನಡೆದ ಕಾವೇರಿ ನೀರಾವರಿ ನಿಗಮದ ಅಂದಾಜು ಪರಿಶೀಲನಾ ಸಮಿತಿಯು 10ನೇ ಸಭೆಯಲ್ಲಿ ತೀರುವಳಿ ನೀಡಿದ್ದು, ದಿನಾಂಕ:05-10-2020 ರಂದು ನಡೆದ ನಿಗಮದ ಮಂಡಳಿಯ 72ನೇ ಸಭೆಯಲ್ಲಿ ಅನುಮೋದನೆಯಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡಲು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ರವರು ಕೋರಿರುತ್ತಾರೆ.

5.ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

<u>ಸರ್ಕಾರಿ ಆದೇಶ ಸಂಖ್ಯೆ:ಜಸಂಇ **12** ಎಂಎಂಕೆ **2021**,</u>

<u>ಬೆಂಗಳೂರು, ದಿನಾಂಕ:**20-05-2022**</u>

Improvements to approach road to Kanva Dam from B. M. Road near Kengal to Dashavara in Channapatana Taluk, Ramanagara District ಕಾಮಗಾರಿಯ ರೂ.28.00 ಕೋಟಿ ಮೊತ್ತದ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ತನ್ನ ಟಿಪ್ಪಣಿ ಸಂಖ್ಯೆ:ಆಇ 482 ಆಕೋ-1/2021, ದಿನಾಂಕ:11-01-2022 ಹಾಗೂ ಯೋಜನಾ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ:ಪಿಡಿಎಸ್ 30 ಎಂಸಿಎಂ 2021-ಪಿಪಿಡಿ, ದಿನಾಂಕ:08-11-2021 ರಲ್ಲಿ ನೀಡಲಾದ ಸಹಮತಿಗಳನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
20/05/2022
( ಮನೋಹರ ವೈ. ರೊಟ್ಟೆ )
ವಿಶೇಷ ಕರ್ತವ್ಯಾಧಿಕಾರಿ
ಜಲಸಂಪನ್ಮೂಲ ಇಲಾಖೆ

<u>ಪ್ರತಿಯನ್ನು:-</u>

1 ಪ್ರಧಾನ ಮಹಾಲೇಖಪಾಲರು (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕ ಪರಿಶೋಧನ), ಕರ್ನಾಟಕ, ಬೆಂಗಳೂರು.

2 ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು.

3 ಮುಖ್ಯ ಇಂಜಿನಿಯರ್, ನೀರಾವರಿ (ದಕ್ಷಿಣ) ವಲಯ, ಕಾನೀನಿನಿ, ಮೈಸೂರು.

4 ಮುಖ್ಯ ಇಂಜಿನಿಯರ್ (ಸಂಪರ್ಕ ಮತ್ತು ಕಟ್ಟಡ), ಲೋಕೋಪಯೋಗಿ ಇಲಾಖೆ, ಬೆಂಗಳೂರು.

5 ನಿರ್ದೇಶಕರು, ಸಂಪೂರ್ಣ ಯೋಜನಾ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ, ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.

6 ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.

7 ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ), ಕರ್ನಾಟಕ ಸರ್ಕಾರ (ಪ್ರಕರಣ ಸಂಖ್ಯೆ:ಸಿ-221/2022, ದಿನಾಂಕ:12-05-2022).

8 ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

+++++